ಕರ್ನಾಟಕ ಸರ್ಕಾರ

**ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿಯವರ ಕಾರ್ಯಾಲಯ, ದ.ಕ., ಮಂಗಳೂರು – 575001.**

Deputy Commissioner & District Magistrate's Office, Dakshina Kannada, Mangaluru-575001.

ನಂ.ಎಂಎಜಿ(2)ಸಿಆರ್ 78/2022/171474/ಸಿ4

ದಿನಾಂಕ : 14-03-2022

**ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ನಡವಳಿ**

ವಿಷಯ:- ಹಿಜಾಬ್ ಮತ್ತು ಕೇಸರಿ ಶಾಲು ವಿವಾದ ಹಿನ್ನಲೆಯಲ್ಲಿ ಶಾಂತಿ ಕಾಪಾಡುವ ಸಲುವಾಗಿ ಮುಂಜಾಗೃತ ಕ್ರಮವಾಗಿ ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯ ಎಲ್ಲಾ ಶೈಕ್ಷಣಿಕ ಸಂಸ್ಥೆಗಳಿಗೆ ದಿನಾಂಕ:15-03-2022 ರಂದು ರಜೆಯನ್ನು ಘೋಷಿಸಿರುವ ಬಗ್ಗೆ.

ಉಲ್ಲೇಖ:

1. ಪೊಲೀಸ್ ಅಧೀಕ್ಷಕರು, ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ಇವರ ಪತ್ರ ಸಂಖ್ಯೆ:08/ಎಸ್ ಬಿ/ಸಾಮಾನ್ಯ/ದ.ಕ/2022 ದಿನಾಂಕ: 13-02-2022, 18-02-2022, 25-02-2022, 04-03-2022, 10-03-2022.
2. ಈ ಕಚೇರಿಯ ಆದೇಶ ಸಮ ಸಂಖ್ಯೆ ದಿನಾಂಕ:13-02-2022, 18-02-2022, 25-02-2022, 05-03-2022. 14-03-2022
3. ಭಾರತೀಯ ದಂಡ ಪ್ರಕ್ರಿಯಾ ಸಂಹಿತೆ 1973 ರ ಕಲಂ 144.

*****

ದಿನಾಂಕ: 15-03-2022 ರಂದು ಗೌರವಾನ್ವಿತ ಉಚ್ಚ ನ್ಯಾಯಾಲಯವು ಹಿಜಾಬ್ ಮತ್ತು ಕೇಸರಿ ಶಾಲು ವಿವಾದದ ಅಂತಿಮ ತೀರ್ಪನ್ನು ನೀಡುವುದಾಗಿ ತಿಳಿದುಬಂದಿದ್ದು, ದಕ್ಷಿಣ ಕನ್ನಡ ಜಿಲ್ಲಾ ಪೊಲೀಸ್ ಘಟಕ ವ್ಯಾಪ್ತಿಯು ಮತೀಯವಾಗಿ ಮತ್ತು ರಾಜಕೀಯವಾಗಿ ಅತೀ ಸೂಕ್ಷ್ಮ ಪ್ರದೇಶವಾಗಿದ್ದು, ಈ ಹಿಂದೆ ಮತೀಯ ಗಲಭೆಗಳು ನಡೆದು ಜೀವ ಹಾನಿ, ಸಾರ್ವಜನಿಕ ಸೊತ್ತುಗಳು ಹಾನಿಯಾಗಿ ಸಾರ್ವಜನಿಕ ನೆಮ್ಮದಿ ಹಾಗೂ ಕಾನೂನು ಸುವ್ಯವಸ್ಥೆಗೆ ತೊಡಕು ಉಂಟಾದ ಬಗ್ಗೆ ಸಾಕಷ್ಟು ಪ್ರಕರಣಗಳು ದಾಖಲಾಗಿರುವುದಾಗಿ ಹಾಗೂ ಗೌರವಾನ್ವಿತ ಉಚ್ಚ ನ್ಯಾಯಾಲಯದಲ್ಲಿ ಹಿಜಾಬ್ ಮತ್ತು ಕೇಸರಿ ಶಾಲು ವಿವಾದದ ವಿಷಯದ ಬಗ್ಗೆ ಅಂತಿಮ ತೀರ್ಪು ನೀಡಲಿದ್ದು, ಕಾನೂನು ಸುವ್ಯವಸ್ಥೆ ಕಾಪಾಡಲು ಮುನ್ನೆಚ್ಚರಿಕೆ ಕ್ರಮವಾಗಿ ದಕ್ಷಿಣಕನ್ನಡ ಜಿಲ್ಲಾ ಪೊಲೀಸ್ ಘಟಕದ ವ್ಯಾಪ್ತಿಯಲ್ಲಿ ಕೂಡಾ ಸಾರ್ವಜನಿಕ ಶಾಂತಿ, ನೆಮ್ಮದಿ ಹಾಗೂ ಕಾನೂನು ಸುವ್ಯವಸ್ಥೆಗೆ ಧಕ್ಕೆ ಬರುವಂತಹ ಘಟನೆಗಳು ನಡೆಯದಂತೆ ಮುಂಜಾಗೃತಾ ಕ್ರಮವಾಗಿ ಭಾರತೀಯ ಕಲಂ 144 ಸಿ.ಆರ್.ಪಿ.ಸಿ. ರಂತೆ ನಿಷೇದಾಜ್ಞೆಯನ್ನು ವಿಧಿಸಿ ಆದೇಶಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಕಾನೂನು ಸುವ್ಯವಸ್ಥೆ ಕಾಪಾಡಲು ಹಾಗೂ ಶಾಂತಿ ಕಾಪಾಡುವ ಹಿತದೃಷ್ಟಿಯಿಂದ ಮುಂಜಾಗೃತಾ ಕ್ರಮವಾಗಿ ದಿನಾಂಕ: **15.03.2022** ರಂದು ದಕ್ಷಿಣ ಕನ್ನಡ ಜಿಲ್ಲಾ ವ್ಯಾಪ್ತಿಯಲ್ಲಿ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ, ಸರಕಾರಿ

ಅನುದಾನಿತ ಮತ್ತು ಖಾಸಗಿ ವಿದ್ಯಾಸಂಸ್ಥೆಗಳಿಗೆ (ಐಟಿಐ, ಡಿಪ್ಲೋಮ, ವೃತ್ತಿಪರ ಕೋರ್ಸ್, ಪದವಿ ತರಗತಿಯೂ ಸೇರಿ) ಒಂದು ದಿನದ ಮಟ್ಟಿಗೆ ರಜೆಯನ್ನು ಘೋಷಿಸಿ ಆದೇಶಿಸಿದೆ. ಈ ರಜೆಯು ಪೂರ್ವ ನಿಯೋಜಿತ ಬಾಹ್ಯ ಪರೀಕ್ಷೆಗಳಿಗೆ ಮತ್ತು ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅನ್ವಯಿಸುವುದಿಲ್ಲ ಹಾಗೂ ಶಾಲಾ ಕಾಲೇಜುಗಳಲ್ಲಿ ನಡೆಯುವ ಪೂರ್ವ ನಿಯೋಜಿತ ಆಂತರಿಕ ಪರೀಕ್ಷೆಗಳನ್ನು ಮುಂದೂಡಿ ರಜೆಯನ್ನು ಘೋಷಿಸಲಾಗಿದೆ.

DISTRICT MAGISTRATE, D.K. GOVT. OF KARNATAKA ಕರ್ನಾಟಕ ಸರಕಾರ ಜಿಲ್ಲಾ ದಂಡಾಧಿಕಾರಿ

**( ಡಾ॥ ರಾಜೇಂದ್ರ ಕೆ.ವಿ , ಭಾ.ಆ.ಸೇ )**
ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ,
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು

ರಿಗೆ,

1. ಪೊಲೀಸ್ ಆಯುಕ್ತರು, ಮಂಗಳೂರು ನಗರ
2. ಮುಖ್ಯ ಕಾರ್ಯನಿರ್ವಾಹಣಾಧಿಕಾರಿಯವರು, ಜಿಲ್ಲಾ ಪಂಚಾಯತ್, ದ.ಕ ಮಂಗಳೂರು
3. ಪೊಲೀಸು ಅಧೀಕ್ಷಕರು, ದ.ಕ.ಜಿಲ್ಲೆ, ಮಂಗಳೂರು
4. ಸಹಾಯಕ ಆಯುಕ್ತರು, ಮಂಗಳೂರು/ಪುತ್ತೂರು
5. ತಹಶೀಲ್ದಾರರು ಮಂಗಳೂರು, ಬಂಟ್ವಾಳ, ಪುತ್ತೂರು, ಸುಳ್ಯ, ಬೆಳ್ತಂಗಡಿ, ಮೂಡಬಿದ್ರೆ, ಕಡಬ
6. ವಿಶೇಷ ತಹಶೀಲ್ದಾರರು, ಮುಲ್ಕಿ
7. ಹಿರಿಯ ಸಹಾಯಕ ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಮಂಗಳೂರು ಇವರಿಗೆ ಸೂಕ್ತ ಕ್ರಮಕ್ಕಾಗಿ
8. ಉಪನಿರ್ದೇಶಕರು,ಸಾರ್ವಜನಿಕ ಶಿಕ್ಷಣ ಇಲಾಖೆ, ಮಂಗಳೂರು
9. ಉಪನಿರ್ದೇಶಕರು,ಪದವಿ ಪೂರ್ವ ಶಿಕ್ಷಣ ಇಲಾಖೆ,ಮಂಗಳೂರು
10. ಜಂಟಿ ನಿರ್ದೇಶಕರು,ಕಾಲೇಜು ಶಿಕ್ಷಣ ಇಲಾಖೆ, ಮಂಗಳೂರು